# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ವಾರ್ಡ್ –144ರ ವಾರ್ಡ್ ಸಭೆಯ ನಡವಳಿ

ಚಿಕ್ಕಪೇಟೆ ವಿಧಾನಸಭಾ ಕ್ಷೇತ್ರದ ಸಿದ್ಧಾಪುರ ವಾರ್ಡ್–144 ರಲ್ಲಿ ವಾರ್ಡ್ ಸಭೆಯನ್ನು ಮಾನ್ಯ ಶ್ರೀ. ನರಸಾರಾಮ್‌ರಾವ್, ಅಧೀಕ್ಷಕ ಅಭಿಯಂತರರು (ದಕ್ಷಿಣ), ನೋಡಲ್ ಅಧಿಕಾರಿ ಹಾಗೂ ವಾರ್ಡ್ ಸಮಿತಿ ಅಧ್ಯಕ್ಷರ ಅಪ್ಪಣೆ ಮೇರೆಗೆ ದಿನಾಂಕ:19/06/2021 ರಂದು ಶನಿವಾರ ಮಧ್ಯಾಹ್ನ 3.00 ಗಂಟೆಗೆ ವಾರ್ಡ್ ಕಮಿಟಿ ಸಭೆಯನ್ನು ಕರೆಯಲಾಗಿದ್ದು, ವಾರ್ಡ್ ಕುಂದು ಕೊರತೆಗಳ ಬಗ್ಗೆ ಚರ್ಚಿಸಲು Zoom Application Link ಮೂಲಕ ಸದಸ್ಯರಿಗೆ ಆಹ್ವಾನ ನೀಡಿದ್ದು, ಸಭೆಗೆ ಅಂತರ್ಜಾಲದ ಲಿಂಕ್ ಮುಖಾಂತರ ಹಾಜರಾಗಿರುವ ಎಲ್ಲರಿಗೂ ಸ್ವಾಗತ ಕೋರುತ್ತಾ, ಸಭೆಯ ವಾರ್ಡ್ ಸಮಿತಿ ಅಧ್ಯಕ್ಷರವರ ಅಧ್ಯಕ್ಷತೆಯೊಂದಿಗೆ ಸಭೆಯನ್ನು ನಡೆಸಲಾಯಿತು.

**ಹಾಜರಿದ್ದವರು:–**

1. ಅಧೀಕ್ಷಕ ಅಭಿಯಂತರರು (ದಕ್ಷಿಣ) ಹಾಗೂ ವಾರ್ಡ್ 144ರ ನೋಡಲ್ ಅಧಿಕಾರಿ.
2. ಸಹಾಯಕ ಅಭಿಯಂತರರು, ವಾರ್ಡ್–144.
3. ವೈದ್ಯಾಧಿಕಾರಿಗಳು, ಪ್ರಾಥಮಿಕ ಆರೋಗ್ಯ ಕೇಂದ್ರ ಸಿದ್ದಾಪುರ.
4. ಹಾಗೂ ಸಾರ್ವಜನಿಕರು.

*********

1. ಶ್ರೀ. ಸುರೇಶ್ ಹೆಚ್.ಕೆ ರವರು ಮಾತನಾಡಿ ಕೋವಿಡ್ ಪರೀಕ್ಷೆಯು ವಾರ್ಡ್‌ನಲ್ಲಿ ನಡೆಯುವಂತೆ ಕೋರಿದರು. ಹಾಗೂ ವ್ಯಾಕ್ಸಿನೇಷನ್ ಅನ್ನು ಸರ್ಕಾರಿ ಕಟ್ಟಡಗಳಲ್ಲಿ ನೀಡಬೇಕೆಂದು ಕೋರಿದರು. ಈ ವಿಷಯವಾಗಿ ಸೂಕ್ತ ಕ್ರಮ ಕೈಗೊಳ್ಳುವಂತೆ ವೈದ್ಯಾಧಿಕಾರಿಗಳು, ಸಿದ್ದಾಪುರ ರವರಿಗೆ ನಿರ್ದೇಶನ ನೀಡಿದರು.
2. ಶ್ರೀ. ಕೆಂಪರಾಜು ಓ. ರವರು ಮಾತನಾಡಿ ವಾರ್ಡ್ ಪ್ರದೇಶದಲ್ಲಿ ಬೀದಿ ನಾಯಿಗಳು ಮತ್ತು ಪ್ರಾಣಿಗಳಿಗೆ ಆಹಾರ ನೀಡದೆ ಪಶು ಸಂಗೋಪನಾ ಇಲಾಖೆಯವರು ಸುಳ್ಳು ಬಿಲ್ ಮಾಡಿದ್ದಾರೆ ಎಂದು ದೂರಿದರು. ಈ ವಿಷಯವಾಗಿ ದೂರವಾಣಿ ಮುಖಾಂತರ ಸದರಿ ಇಲಾಖೆಯವನ್ನು ಸಂಪರ್ಕಿಸಿದಾಗ ಈ ರೀತಿಯ ಯಾವುದೇ ಸುಳ್ಳು ಬಿಲ್ ತಯಾರಿಕೆ ನಡೆದಿರುವುದಿಲ್ಲ ಎಂದು ಸಭೆಗೆ ತಿಳಿಸಿದರು.



Scanned with CamScanner

3. ಶ್ರೀ. ತೇಜಸ್‌ಗೌಡ ರವರು ಮಾತನಾಡಿ ಪಾಲಿಕೆಯಲ್ಲಿ ಸಾರ್ವಜನಿಕರಿಗೆ ವ್ಯಾಕ್ಸಿನೇಷನ್ ನೀಡುವ ಬಗ್ಗೆ ವೈದ್ಯರೊಂದಿಗೆ ಮನೆ ಮನೆಗೆ ಹೋಗಿ ಜಾಗೃತಿ ಮೂಡಿಸುವುದು ಅವಶ್ಯವಿದೆ ಎಂದು ಹೇಳಿದರು. ಈ ವಿಷಯವಾಗಿ ಅಧ್ಯಕ್ಷರು ಮಾತನಾಡಿ ವೈದ್ಯರಿಗೆ ಕ್ರಮ ವಹಿಸಲು ಸೂಚಿಸಿದರು.

4. ಶ್ರೀ. ಮಂಜುನಾಥ್ ರವರು ಮಾತನಾಡಿ ವಾರ್ಡ್ ಪ್ರದೇಶದಲ್ಲಿ ಮಾಂಸದ ಅಂಗಡಿಗಳಿಗೆ ಯಾವುದೇ ಅನುಮತಿ ನೀಡದಿರುವುದು ಹಾಗೂ ಮಾಂಸದ ಅಂಗಡಿಗಳಿಂದ ಉತ್ಪತ್ತಿಯಾಗುವ ಕಸವನ್ನು ವಾರ್ಡ್ ಪ್ರದೇಶದಲ್ಲಿ ಸುರಿಯುತ್ತಿರುವುದು ಕಂಡು ಬಂದಿರುವುದಾಗಿ ತಿಳಿಸಿದರು. ಈ ವಿಷಯವಾಗಿ ಅಧ್ಯಕ್ಷರು ಸಂಬಂಧಪಟ್ಟ ಘನತ್ಯಾಜ್ಯ ನಿರ್ವಹಣೆ ವಿಭಾಗ ರವರಿಗೆ ನಿರ್ದೇಶನ ನೀಡುವುದಾಗಿ ಸಭೆಗೆ ತಿಳಿಸಿದರು.

5. ಶ್ರೀ. ಅಶೋಕ್ ರವರ ಮಾತನಾಡಿ ಟಿ. ಮರಿಯಪ್ಪ ರಸ್ತೆಯಲ್ಲಿ ನಿರ್ಮಿಸುತ್ತಿರುವ ಆರ್.ಸಿ.ಸಿ ಚರಂಡಿಯ ನೀರು ಯಾವ ದಿಕ್ಕಿನಲ್ಲಿ ಹರಿಯುತ್ತದೆ ಎಂದು ಕೇಳಿದರು. ಈ ವಿಷಯವಾಗಿ ವಾರ್ಡಿನ ಅಭಿಯಂತರರು ಸಂಬಂಧಪಟ್ಟ ರಸ್ತೆ ಮತ್ತು ಮೂಲಭೂತ ಸೌಕರ್ಯ ಇಲಾಖೆಯ ಅಧಿಕಾರಿಯವರೊಂದಿಗೆ ಚರ್ಚಿಸಿ ಮುಂದಿನ ಸಭೆಯಲ್ಲಿ ತಿಳಿಸುವುದಾಗಿ ಸಭೆಗೆ ತಿಳಿಸಿದರು.

6. ಶ್ರೀ. ಅಶೋಕ್ ರವರ ಮಾತನಾಡಿ ಮಹಾಬೋದಿಗೆ ಗುತ್ತಿಗೆಗೆ ನೀಡಿರುವ (ಮಲ್ಲಿಗೆ ಆಸ್ಪತ್ರೆ) ಕಟ್ಟಡದಲ್ಲಿ ಯಾವ ಉದ್ದೇಶಕ್ಕೆ ಗುತ್ತಿಗೆ ನೀಡಲಾಗಿದೆ ಎಂದು ಪ್ರಶ್ನಿಸಿದರು. ಈ ವಿಷಯವಾಗಿ ಸಂಬಂಧಪಟ್ಟ ಇಲಾಖೆಯವರಿಂದ ವಿವರ ಪಡೆದು ಮುಂದಿನ ಸಭೆಯಲ್ಲಿ ನೀಡಲಾಗುವುದೆಂದು ತಿಳಿಸಿದರು.

7. ಶ್ರೀ. ಮಲ್ಲಿಕಾರ್ಜುನಯ್ಯ ರವರು ಮಾತನಾಡಿ ಜೂಮ್ ಮೀಟಿಂಗ್‌ನಲ್ಲಿ ಸರ್ಕಾರಿ ಅಧಿಕಾರಿಗಳು ಪಾಲ್ಗೊಳ್ಳದೇ ಇರುವ ಬಗ್ಗೆ ವಿಷಾದ ವ್ಯಕ್ತಪಡಿಸಿದರು. ಈ ವಿಷಯವಾಗಿ ಅಧ್ಯಕ್ಷರು ಮಾತನಾಡಿ ಅಧಿಕಾರಿಗಳು ವಾರ್ಡ್ ವ್ಯಾಪ್ತಿಯಲ್ಲಿ ಕೋವಿಡ್ ತುರ್ತು ಪರಿಸ್ಥಿತಿಯ ಕೆಲಸ ಕಾರ್ಯಗಳನ್ನು ನಿರ್ವಹಿಸುತ್ತಿರುವುದರಿಂದ ಜೂಮ್ ಮಿಟಿಂಗ್‌ಗಳಿಗೆ ಸರ್ಕಾರಿ ಅಧಿಕಾರಿಗಳು ಹೆಚ್ಚಾಗಿ ಪಾಲ್ಗೊಂಡಿಲ್ಲವೆಂದು ಮನವರಿಕೆ ಮಾಡಿದರು.



Scanned with CamScanner

8. ಶ್ರೀ. ಅಜ್ಮಲ್ ರವರು ಮಾತನಾಡಿ ಕೇವಲ ಎರಡು ದಿನದಲ್ಲಿ 44 ವರ್ಷದ ಮೇಲ್ಪಟ್ಟ ಸುಮಾರು 200 ಜನ ಸಾರ್ವಜನಿಕರಿಗೆ ನಮ್ಮ ವೈದ್ಯಾಧಿಕಾರಿಗಳು ವ್ಯಾಕ್ಸಿನೇಷನ್ ನೀಡಿರುವುದಾಗಿ ತಿಳಿಸಿ ಅಭಿನಂದನೆ ವ್ಯಕ್ತಪಡಿಸಿದರು. ಹಾಗೂ 18 ವರ್ಷ ಮೇಲ್ಪಟ್ಟವರಿಗೆ ಯಾವ ದಿನಾಂಕದಿಂದ ವ್ಯಾಕ್ಸಿನೇಷನ್ ಪ್ರಾರಂಭ ಮಾಡುವುದಾಗಿ ಕೋರಿದರು. ಈ ವಿಷಯವಾಗಿ ವೈದ್ಯಾಧಿಕಾರಿಗಳು ಮಾತನಾಡಿ ಮೇಲಾಧಿಕಾರಿಗಳ ನಿರ್ದೇಶನದ ಮೇರೆಗೆ 18 ವರ್ಷ ಮೇಲ್ಪಟ್ಟವರಿಗೆ ವ್ಯಾಕ್ಸಿನೇಷನ್ ನೀಡುವುದಾಗಿ ತಿಳಿಸಿದರು ಹಾಗೂ ವಾರ್ಡ್ ವ್ಯಾಪ್ತಿಯ ಪ್ರತಿಯೊಬ್ಬ ಸಾರ್ವಜನಿಕರು ಕೋವಿಡ್ ಪರೀಕ್ಷೆಯನ್ನು ಮಾಡಿಸಿಕೊಳ್ಳುವುದರಿಂದ ಪಾಸಿಟೀವ್ ಮತ್ತು ನೆಗೆಟೀವ್ ವರದಿ ದೊರಕಿದ ನಂತರ ವ್ಯಾಕ್ಸಿನೇಷನ್ ಹೆಚ್ಚಾಗಿ ಮಾಡಲು ಅನುಕೂಲವಾಗುವುದು ಎಂದು ಸಭೆಗೆ ತಿಳಿಸಿದರು.

9. ಶ್ರೀ. ಸುರೇಶ್ ಹೆಚ್.ಕೆ ರವರು ಮಾತನಾಡಿ ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ ವತಿಯಿಂದ 2ನೇ ಅಡ್ಡರಸ್ತೆ ಅರೆಕೆಂಪನಹಳ್ಳಿಯಲ್ಲಿ ರಸ್ತೆ ಅಗೆದಿದ್ದು, ಮಣ್ಣನ್ನು ತೆರವುಗೊಳಿಸಲು ಕೋರಿದರು. ಈ ವಿಷಯವಾಗಿ ವಾರ್ಡಿನ ಅಭಿಯಂತರರು ಸ್ಪಂದಿಸಿ ಸಂಬಂಧಪಟ್ಟ ಇಲಾಖೆಗೆ ಈ ಬಗ್ಗೆ ಕೂಡಲೇ ಕ್ರಮ ವಹಿಸಲು ತಿಳಿಸುವುದಾಗಿ ಸಭೆಗೆ ತಿಳಿಸಿದರು.

10. ಶ್ರೀ. ಕೆಂಪರಾಜು ಓ. ರವರು ಮಾತನಾಡಿ ಈಗಾಗಲೇ ಸಾಕಷ್ಟು ಬಾರಿ 5ನೇ ಮುಖ್ಯರಸ್ತೆ ಸೋಮೇಶ್ವರ ಕಾಲೋನಿ ಎಲೆಕ್ಟ್ರಿಕಲ್ ಪೋಲ್‌ಗಳನ್ನು ಸರಿಪಡಿಸಲು ಕೋರಲಾಗಿದ್ದು, ತಹಲ್‌ವರೆಗೆ ಬೆಸ್ಕಾಂ ಇಲಾಖೆಯವರು ತೆರವುಗೊಳಿಸಿಲ್ಲವೆಂದು ತಿಳಿಸಿದರು. ಈ ವಿಷಯವಾಗಿ ಅಧ್ಯಕ್ಷರು ಮಾತನಾಡಿ ಸಂಬಂಧಪಟ್ಟ ಇಲಾಖೆಗೆ ಈ ಬಗ್ಗೆ ಕೂಡಲೇ ಕ್ರಮ ವಹಿಸಲು ತಿಳಿಸುವುದಾಗಿ ಸಭೆಗೆ ತಿಳಿಸಿದರು.

ಮೇಲಿನ ಈ ಎಲ್ಲಾ ಚಟುವಟಿಕೆಗಳನ್ನು ಕ್ರಮಬದ್ಧವಾಗಿ ನಿರ್ವಹಿಸಲು ಎಲ್ಲಾ ಸಿಬ್ಬಂಧಿ ವರ್ಗದವರು ಒಂದುಗೂಡಿ ಈ ಕಾರ್ಯದಲ್ಲಿ ಪಾಲ್ಗೊಂಡು ಮಾನ್ಯ ಆಯುಕ್ತರು (ಬಿಬಿಎಂಪಿ) ರವರು ವಹಿಸಿರುವ ಜವಾಬ್ಧಾರಿಯನ್ನು ಯಶಸ್ವಿಯಾಗಿ ನಿರ್ವಹಿಸಲು ಎಲ್ಲರೂ ಸಹಕರಿಸಬೇಕೆಂದು ಹೇಳುತ್ತಾ ಸಭೆ ಮುಕ್ತಾಯಗೊಳಿಸಿದರು.

19/6/21

ಕಾರ್ಯದರ್ಶಿ & ಸಹಾಯಕ ಅಭಿಯಂತರರು
ವಾರ್ಡ್ ಸಂಖ್ಯೆ – 144
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

19/6

ಅಧ್ಯಕ್ಷರು & ನೋಡಲ್ ಅಧಿಕಾರಿ
ವಾರ್ಡ್ ಸಂಖ್ಯೆ – 144
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ



Scanned with CamScanner